**(ದಿಃ02-09-2024 ರ ಮಧ್ಯಂತರ ಅರ್ಜಿ ಸಂಖ್ಯೆ 5-7 ರ ಮೇಲೆ ಆದ ಆದೇಶದ ಅನ್ವಯ)**

**ಸಾಕ್ಷಿಗೆ ದಿನಾಂಕಃ10-09-2024 ರಂದು ಪುನಃ ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**ಃಮುಂದುವರೆದ ಮುಖ್ಯ ವಿಚಾರಣೆ ಃ ವಾದಿಗಳ ಪರಃ ಶ್ರೀ. ವಿ ಆರ್ ಎನ್ ವಕೀಲರಿಂದ ಃ**

ನಾನು ಈ ದಿನ ನನ್ನ ಹೆಚ್ಚುವರಿ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರವನ್ನು ಸಲ್ಲಿಸಿದ್ದು, ನನ್ನ ಮುಖ್ಯ ವಿಚಾರಣಾ ಪತ್ರದಲ್ಲಿ ಹೇಳಿರುವ ಸಂಗತಿಗಳೆಲ್ಲವೂ ಸತ್ಯವಾಗಿದೆಯೆಂದು ಪ್ರಮಾಣೀಕರಿಸುತ್ತೇನೆ. ಪ್ರಮಾಣಪತ್ರವನ್ನು ನಾನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಮುಂದುವರೆದು ನನ್ನ ವಾದ ಪತ್ರಕ್ಕೆ ಪೂರಕವಾಗುವಂತೆ ಕೆಳಕಂಡ ದಾಖಲೆಗಳನ್ನು ನ್ಯಾಯಾಲಯದಲ್ಲಿ ನೋಡಿ ಗುರುತಿಸಿರುತ್ತೇನೆ.

| ಕ್ರಮ ಸಂಖ್ಯೆಃ | ದಾಖಲೆಗಳು | ನಿಶಾನೆಗಳು |
|---|---|---|
| 1. | ದಿಃ 23-112021 ರಂದು ಎ ಡಿ ಎಲ್ ಆರ್ ಶೃಂಗೇರಿ ರವರು ತಹಸೀಲ್ದಾರ್ ರವರಿಗೆ ಬರೆದ ಪತ್ರದ ಜೆರಾಕ್ಸ್ ಪ್ರತಿಯನ್ನು ಹಾಜರು ಪಡಿಸಿದ್ದು, ಅದನ್ನು ಪ್ರತಿವಾದಿಗಳ ಪರ ವಕೀಲರ ತಕರಾರಿಗೆ ಒಳ ಪಟ್ಟು | ನಿಪಿ-19 |
| 2. | ದಿಃ 26-11-2021 ರಂದು ಪ್ರತಿವಾದಿಗೆ ತಹಸೀಲ್ದಾರ್ ರವರಿಗೆ ಬರೆದ ಪತ್ರದ ಜೆರಾಕ್ಸ್ ಪ್ರತಿಯನ್ನು ಹಾಜರು ಪಡಿಸಿದ್ದು, ಅದನ್ನು ಪ್ರತಿವಾದಿಗಳ ಪರ ವಕೀಲರ ತಕರಾರಿಗೆ ಒಳ ಪಟ್ಟು | ನಿಪಿ-20 |
| 3. | ದಿಃ 23-11-2021 ರಂದು ಹೆಚ್ಚುವರಿ ಸರ್ಕಾರಿ ಅಭಿಯೋಜಕರು ತಹಸೀಲ್ದಾರ್ ರವರಿಗೆ ಬರೆದ ಪತ್ರದ ಜೆರಾಕ್ಸ್ ಪ್ರತಿಯನ್ನು ಹಾಜರು ಪಡಿಸಿದ್ದು, ಅದನ್ನು ಪ್ರತಿವಾದಿಗಳ ಪರ ವಕೀಲರ ತಕರಾರಿಗೆ ಒಳ ಪಟ್ಟು | ನಿಪಿ-21 |
| 4. | ದಾವಾ ಸ್ವತ್ತಿನ ನಕ್ಷೆಯ ಜೆರಾಕ್ಸ್ ಪ್ರತಿ ಹಾಜರು ಪಡಿಸಿದ್ದು, ಅದನ್ನು ಪ್ರತಿವಾದಿಗಳ ಪರ ವಕೀಲರ ತಕರಾರಿಗೆ ಒಳ ಪಟ್ಟು | ನಿಪಿ-22 |
| 5. | ದಾವಾ ಸ್ವತ್ತಿಗೆ ಸಂಬಂಧ ಪಟ್ಟ ಜಂಟಿ ವರದಿಯ ಜೆರಾಕ್ಸ್ ಪ್ರತಿ ಹಾಜರು ಪಡಿಸಿದ್ದು, ಅದನ್ನು ಪ್ರತಿವಾದಿಗಳ ಪರ ವಕೀಲರ ತಕರಾರಿಗೆ ಒಳ ಪಟ್ಟು | ನಿಪಿ-23 |
| 6. | ದಿಃ 02-07-2022 ರಂದು ಮೆಸ್ಕಾಂ ನವರು ನನಗೆ ಕಳುಹಿಸಿರುವ ಪತ್ರವನ್ನು ಹಾಜರು ಪಡಿಸಿದ್ದು, ಅದನ್ನು | ನಿಪಿ-24 |

ಆದುದರಿಂದ ದಾವೆಯಲ್ಲಿ ಕೋರಿಕೊಂಡಂತೆ ದಾವೆಯನ್ನು ಡಿಕ್ರಿ ಮಾಡಿಕೊಡಬೇಕೆಂದು ಕೋರಿಕೊಳ್ಳುತ್ತೇನೆ.

**(ಮುಂದುವರಿದ ಪಾಟೀ ಸವಾಲಿಗೆ ಪ್ರತಿವಾದಿ ಪರ ವಕೀಲರು ಸಮಯಾವಕಾಶ ಕೋರಿದ್ದು, ಸಮಯಾವಕಾಶ ನೀಡಿ ಮುಂದೂಡಲಾಯಿತು.)**

**(ದಿನಾಂಕಃ10-09-2024 ರಂದು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇ ಎ ಒ**

ಸಹಿ/-
**ಸಿ.ಜೆ ಮತ್ತು ಜೆ.ಎಂ.ಎಫ್.ಸಿ ನ್ಯಾಃ**
**ಶೃಂಗೇರಿ.**